# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ವಿವಿಧ ಜಿಲ್ಲಾ/ತಾಲ್ಲೂಕು ಪಂಚಾಯತಿಗಳ ಅವುಗಳ ವ್ಯಾಪ್ತಿಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ತೆರವಾಗಿದ್ದ ಹುದ್ದೆಗಳು ಭರ್ತಿಯಾದ್ದರಿಂದ ವೇತನ/ಬಾಕಿ ವೇತನ ವೆಚ್ಚಕ್ಕಾಗಿ ಕೊರತೆಯಾಗಿರುವ ಅನುದಾನವನ್ನು ಬಿಡುಗಡೆಗೊಳಿಸುವ ಬಗ್ಗೆ

**ಓದಲಾಗಿದೆ:**

1. ಸುತ್ತೋಲೆ ಸಂಖ್ಯೆ: ಆಇ 01 ಜಿಪಅ 2014 ದಿನಾಂಕ:1.2.2014
2. ಆರ್ಥಿಕ ಇಲಾಖೆ ವೆಚ್ಚ 5 ಮತ್ತು 10 ಶಾಖೆಗಳ ಇ-ಆಫೀಸ್ ಕಡತಗಳು

**ಪ್ರಸ್ತಾವನೆ:**

ರಾಜ್ಯದ ವಿವಿಧ ಜಿಲ್ಲಾ ಪಂಚಾಯತ್ ಮತ್ತು ತಾಲ್ಲೂಕು ಪಂಚಾಯತಿಗಳ ವ್ಯಾಪ್ತಿಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಲ್ಲಿ ತೆರವಾಗಿದ್ದ ವಿಶೇಷ ಪೌಷ್ಠಿಕ ನಿರೀಕ್ಷಕರ ಹುದ್ದೆ ಹಾಗೂ ಬೆರಳಚ್ಚುಗಾರರಿಗೆ ಮುಂಬಡ್ತಿ ನೀಡಿ ತೆರವಾದ ಹುದ್ದೆಗಳಿಗೆ ನಿಯುಕ್ತಿಗೊಳಿಸಿರುವುದಿಂದ ಬಾಕಿ/ಪ್ರಸಕ್ತ ಸಾಲಿನ ವೇನ ವೆಚ್ಚಕ್ಕಾಗಿ ಲೆಕ್ಕ ಶೀರ್ಷಿಕೆ 2235-00-101-0-27-005ರಡಿ ಉಡುಪಿ ಮತ್ತು ಮಂಡ್ಯ ಜಿಲ್ಲಾ ಪಂಚಾಯತಿಗಳಿಗೆ ಅನುಕ್ರಮವಾಗಿ ರೂ.29.00ಲಕ್ಷಮತ್ತುರೂ.31.09ಲಕ್ಷ ಒಟ್ಟು ರೂ.60.09ಲಕ್ಷಗಳನ್ನು ಜಿಲ್ಲಾ ಪಂಚಾಯತ್ ಕಾರ್ಯಕ್ರಮದಡಿ ಹಾಗೂ

ಮೈಸೂರು ತಾಲ್ಲೂಕು ಪಂಚಾಯತಿ ವ್ಯಾಪ್ತಿಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ತೆರವಾಗಿದ್ದ ಹುದ್ದೆಗಳು ಭರ್ತಿಯಾದ್ದರಿಂದ ಬಾಕಿ/ಪ್ರಸಕ್ತ ಸಾಲಿನ ವೇತನ ವೆಚ್ಚಕ್ಕಾಗಿ ರೂ.15.40ಲಕ್ಷಗಳನ್ನು ಲೆಕ್ಕ ಶೀರ್ಷಿಕೆ 2210-00-104-0-61-005ರಡಿ ಹೆಚ್ಚುವರಿಯಾಗಿ ಒದಗಿಸಿ ಬಿಡುಗಡೆಗೊಳಿಸುವಂತೆ ಆರ್ಥಿಕ ಇಲಾಖೆ ವೆಚ್ಚ 5 ಮತ್ತು 10 ಶಾಖೆಗಳ ಕಡತಗಳಲ್ಲಿ ಪ್ರಸ್ತಾವಿಸಲಾಗಿದೆ.

ಪ್ರಸ್ತಾವನೆಯನ್ನು ಪರಿಶೀಲಿಸಿ ಜಿಲ್ಲಾ ಪಂಚಾಯತ್ ಕಾರ್ಯಕ್ರಮದಡಿಯ ವೆಚ್ಚಕ್ಕಾಗಿ ರೂ.60.09ಲಕ್ಷಗಳನ್ನು ಶೀರ್ಷಿಕೆ 2515-00-196-1-05-300 ರಡಿ ಮತ್ತು ತಾಲ್ಲೂಕು ಪಂಚಾಯತ್ ಕಾರ್ಯಕ್ರಮದಡಿಯ ವೆಚ್ಚಕ್ಕಾಗಿ ರೂ15.40ಲಕ್ಷಗಳನ್ನು ಲೆಕ್ಕ ಶೀರ್ಷಿಕೆ 2515-00-197-1-10-300ರಡಿ ಬಿಡುಗಡೆಗೊಳಿಸಲು ನಿರ್ಣಯಿಸಿ ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರದ ಆದೇಶ ಸಂಖ್ಯೆ: ಆಇ 3 ವೆಚ್ಚ 6/2021(ಇ) ದಿನಾಂಕ: 2ನೇ ಜನವರಿ 2021

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಈ ಆದೇಶಕ್ಕೆ ಲಗತ್ತಿಸಿರುವ ಅನುಬಂಧದ ಕಾಲಂ 2ರ ಜಿಲ್ಲಾ/ತಾಲ್ಲೂಕು ಪಂಚಾಯತಿಗಳಿಗೆ ಕಾಲಂ 3 ಕಾರ್ಯಕ್ರಮದಡಿ ಬಾಕಿ/ಪ್ರಸಕ್ತ ಸಾಲಿನ ವೇತನ/ಸಂಭಾವನೆ ವೆಚ್ಚಕ್ಕಾಗಿ ಅಗತ್ಯವಿರುವ ಅನುದಾನವನ್ನು ಕಾಲಂ 4 ಮತ್ತು 5ರ ಲೆಕ್ಕ ಶೀರ್ಷಿಕೆಯಡಿ ಕಾಲಂ 6ರ ಒಟ್ಟು ರೂ.75.49ಲಕ್ಷ (ರೂಪಾಯಿ ಎಪ್ಪತ್ತೈದು ಲಕ್ಷದ ನಲವತ್ತೊಂಬತ್ತು ಸಾವಿರಗಳು ಮಾತ್ರ) ಗಳನ್ನು ಬಿಡುಗಡೆಗೊಳಿಸಿದೆ. ಈ ರೀತಿ ಬಿಡುಗಡೆಗೊಳಿಸಿದ ಅನುದಾನವನ್ನು ಮೇಲೆ (1) ರಲ್ಲಿ ಓದಲಾದ ಸುತ್ತೋಲೆಯಲ್ಲಿ ನೀಡಿರುವ ನಿರ್ದೇಶನದಂತೆ ಕ್ರಮವಹಿಸಿ ಬಿಲ್ಲುಗಳ ತೀರುವಳಿಗೆ ಕ್ರಮವಹಿಸತಕ್ಕದ್ದು. ಪ್ರಸ್ತುತ ಪ್ರಕರಣಕ್ಕೆ ಆರ್ಥಿಕ ಇಲಾಖೆ ಮರುಹೊಂದಾಣಿಕೆಗೆ ಸಹಮತಿಸಿದೆ ಎಂದು ಭಾವಿಸತಕ್ಕದ್ದು.

(ಸೂಚನೆ: ಬಿಡುಗಡೆಗೊಳಿಸಿರುವ ಅನುದಾನವನ್ನು ನಿಧಿ-2ಕ್ಕೆ ಜಮೆ ಮಾಡಿಕೊಂಡು, ನಂತರ ಸಂಬಂಧಪಟ್ಟ ಜಿಲ್ಲಾ ಪಂಚಾಯತಿ ಮುಖ್ಯಲೆಕ್ಕಾಧಿಕಾರಿಗಳು ಮರು ಹೊಂದಾಣಿಕೆ ಆದೇಶವನ್ನು ಈ ಕೆಳಗಿನ ಅಧಿಕಾರಿಗಳಿಗೆ ಸುತ್ತೋಲೆರನ್ವಯ ಪ್ರಸ್ತಾವನೆ ಆರ್ಥಿಕ ಇಲಾಖೆಗೆ ಸಲ್ಲಿಸಿ ಖಜಾನೆಯಲ್ಲಿ ಅಪ್ ಲೋಡ್ ಮಾಡಿಕೊಳ್ಳುವುದು.)

| ಆರ್ಥಿಕ ಇಲಾಖೆ ಕಡತ ಸಂಖ್ಯೆ | ಜಿಲ್ಲಾ/ತಾಲ್ಲೂಕು ಪಂಚಾಯತ್ | ಕಾರ್ಯಕ್ರಮದ ಲೆಕ್ಕ ಶೀರ್ಷಿಕೆ | ಲೆಕ್ಕ ಶೀರ್ಷಿಕೆ 2515-00-196-1-05-300ರಡಿ ಬಿಡುಗಡೆಗೊಳಿಸಿದ ಅನುದಾನ | ಲೆಕ್ಕ ಶೀರ್ಷಿಕೆ 2515-00-197-1-10-300ರಡಿ ಬಿಡುಗಡೆಗೊಳಿಸಿದ ಅನುದಾನ | ಒಟ್ಟು (ರೂ. ಲಕ್ಷಗಳಲ್ಲಿ) |
|---|---|---|---|---|---|
| 1 | 2 | 3 | 4 | 5 | 6 |
| ಆಇ 402 ವೆ10/2020(ಇ) | ಉಡುಪಿ<br>ಮಂಡ್ಯ | 2235-00-101-0-27-005 | 29.00<br>31.09 1415564405 | | 60.09 |
| ಆಇ 662 ವೆ5/2020(ಇ) | ಮೈಸೂರು | 2210-00-104-0-61-005 | 1415564424 | 15.40 | 15.40 |
| | ಒಟ್ಟು | | 60.09 | 15.40 | 75.49 |

uploaded on 2/1/21

ಈ ಕಾರ್ಯವನ್ನು ಆದ್ಯತೆಯ ಮೇಲೆ ಕ್ರಮವಹಿಸತಕ್ಕದ್ದು, ಯಾವುದೇ ಹಂತದಲ್ಲಿ ಅಂದರೆ ಜಿಲ್ಲಾ ಪಂಚಾಯತಿ ಅಥವಾ ಅನುಷ್ಠಾನಾಧಿಕಾರಿಗಳ ಹಂತದಲ್ಲಿ ವಿಳಂಬವಾಗಿ ಅನುದಾನ ವ್ಯಪಗತವಾದಲ್ಲಿ ಮತ್ತೊಮ್ಮೆ ಅನುದಾನವನ್ನು ಒದಗಿಸುವುದಿಲ್ಲವೆಂದು ಮತ್ತು ವಿಳಂಬಗೊಳಿಸಿದ ಅಧಿಕಾರಿಗಳ ವಿರುದ್ಧ ನಿಯಮಾನುಸಾರ ಕ್ರಮವಹಿಸಲಾಗುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

(ಪುರುಷೋತ್ತಮ್ ಸಿಂಗ್ ಬಿ.ಹೆಚ್.)
ವಿಶೇಷಾಧಿಕಾರಿ(ಜಿ.ಪಂ.) ಹಾಗೂ ಪದನಿಮಿತ್ತ
ಸರ್ಕಾರದ ಉಪ ಕಾರ್ಯದರ್ಶಿ
ಆರ್ಥಿಕ ಇಲಾಖೆ

1. ಮಹಾಲೇಖಪಾಲರು(ಎ&ಇ) ಲೆಕ್ಕ ಪರಿಶೋಧನೆ 1 & 2, ಕರ್ನಾಟಕ, ಬೆಂಗಳೂರು
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ಖಜಾನೆ-2, 7ನೇ ಮಹಡಿ, ವಾಣಿಜ್ಯ ತೆರಿಗೆ ಕಟ್ಟಡ, ಗಾಂಧಿನಗರ, ಬೆಂಗಳೂರು-2ರವರಿಗೆ
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ/ಆರೋಗ್ಯ & ಕುಟುಂಬ ಕಲ್ಯಾಣ ಇಲಾಖೆ
4. ಸಂಬಂಧಿಸಿದ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು/ಮುಖ್ಯ ಲೆಕ್ಕಾಧಿಕಾರಿಗಳು
5. ಜಂಟಿ ನಿರ್ದೇಶಕರು, ಖಜಾನೆ ಗಣಕಜಾಲ ನಿರ್ವಹಣಾ ಕೇಂದ್ರ, ಖನಿಜ ಭವನ, ಬೆಂಗಳೂರು
6. ಸಂಬಂಧಿಸಿದ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು
7. ಸಂಬಂಧಿಸಿದ ಜಿಲ್ಲಾ/ಉಪ ಖಜಾನಾಧಿಕಾರಿಗಳು
8. .ರಕ್ಷಾ ಕಡತಕ್ಕೆ
9. ಹೆಚ್ಚುವರಿ ಪ್ರತಿ